**ಮಧ್ಯಂತರ ಅರ್ಜಿ ಸಂಖ್ಯೆ 4 ರ ಮೇಲೆ ಆದ ಆದೇಶದ ಮೇರೆಗೆ ಸಾಕ್ಷಿಯನ್ನು ದಿಃ 21-02-2025 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ನಂಬರ 4 ಮತ್ತು 5 ರ ಪರ ವಕೀಲರಿಂದಃ**

1) ನನ್ನ ತಾಯಿಯಾದ ಮಾಯವ್ವಾ ಮತ್ತು ಪ್ರತಿವಾದಿ 4 ಮತ್ತು 5 ರವರ ತಾಯಿಯಾದ ಶ್ರೀದೇವಿ ರವರು ಇನ್ನೂ ಜೀವಂತವಿರುತ್ತಾರೆ ಎಂದರೆ ಸರಿ. ನನ್ನ ತಾಯಿಯನ್ನು ಮತ್ತು ಪ್ರತಿವಾದಿ 4 ಮತ್ತು 5 ರವರ ತಾಯಿಯನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿರುವುದಿಲ್ಲ ಎಂದರೆ ಸರಿ. ನನ್ನ ತಾಯಿಯಾದ ಮಾಯವ್ವಾ ರವರು ನನ್ನ ತಂದೆಯ ಮೊದಲನೇ ಹೆಂಡತಿಯಾಗಿರುತ್ತಾಳೆ ಎಂದು ತೋರಿಸಲು ಯಾವುದೇ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲಾ ಎಂದರೆ ಸರಿಯಲ್ಲ. ಪ್ರತಿವಾದಿ 4 ಮತ್ತು 5 ರವರ ತಾಯಿಯಾದ ಶ್ರೀದೇವಿ ರವರು ನನ್ನ ತಂದೆಯ ಎರಡನೇ ಹೆಂಡಯಾಗಿರುತ್ತಾಳೆ ಎಂದು ತೋರಿಸಲು ಸಹ ಯಾವುದೇ ದಾಖಲೆಗಳನ್ನು ಹಾಜರು ಪಡಿಸಿರುವುದಿಲ್ಲ ಎಂದರೆ ಸರಿಯಲ್ಲ.

2) ದಾವಾ ಸ್ವತ್ತುಗಳು ನಮ್ಮ ಪಿತ್ರಾರ್ಜಿತ ಸ್ವತ್ತುಗಳಾಗಿರುತ್ತವೆ ಎಂದು ತೋರಿಸಲು ಸಹ ಯಾವುದೇ ದಾಖಲೆಗಳನ್ನು ಹಾಜರು ಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಈ ದಾವೆ ಸಲ್ಲಿಸಲು ನನಗೆ ಯಾವುದೇ ವ್ಯಾಜ್ಯ ಕಾರಣ ಉಂಟಾಗಿರುವುದಿಲ್ಲ ಎಂದರೆ

ಸರಿಯಲ್ಲ. ನಾನು ಪ್ರತಿವಾದಿಯರಿಗೆ ಕಾಡಬೇಕು ಎನ್ನುವ ಉದ್ದೇಶದಿಂದ ಇದೊಂದು ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

(ರಾಜೀವ ಗೋಳಸಾರ)
ಪ್ರ.ದಿ.&ನ್ಯಾದಂ., ಗೋಕಾಕ.